ಸದರೀ ದರಖಾಸ್ತುದಾರರಾದ ಮಂಜನಾಯಿಕರ, ಅರ್ಜೀಯನ್ನು 1887ನೇ ಇಸವಿ ಮಾರ್ಚೀ ತಿಂಗಳು ತಾರೀಖು 3ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೃಷ್ಣನಾಯಿಕರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಜನವರೀ ತಿಂಗಳು 28ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1887ನೇ ಇಸವಿ ಅರ್ಜೀ ನಂಬರ್. 61.

ಮೃತಪಟ್ಟ ಮೂಗೂರು ದೇವರಾಜೇ ಅರಸಿನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರಳು ದೇವಾಜಮ್ಮಣೀರು, ಮೃತಪಟ್ಟ ಸದರೀ ದೇವರಾಜೇ ಅರಸಿನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಕಿಲ್ಲೇ ಸ್ಥಳದ ಸದರೀ ದೇವಾಜಂಮಣೀರು ಸದರೀ ವಾಸಸ್ಥಳಾಗಿ ಮೃತಪಟ್ಟದೇವರಾಜೇ ಅರಸಿನವರ ಜಿಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸೂರೀ ದರಖಾಸ್ತುದಾರರಾದ ದೇವಾಜಂಮಣ್ಣೀರ ಅರ್ಜಿಯನ್ನು 1887ನೇ ಇಸವಿ ಮಾರ್ಚಿ ತಿಂಗಳು ತಾರೀಖು 3ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೇವರಾಜೇ ಅರಸಿನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 73.

ಮೃತಪಟ್ಟ ವೆಂಕಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ತಾಯೂರು ಜಯರಾಮಾಚಾರಿ, ಮೃತಪಟ್ಟ ಸದರೀ ವೆಂಕಮ್ಮನವರಿಗೆ ಗಂಡ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಕೃಷ್ಣರಾಜೇಂದ್ರಪುರದ ಅಗ್ರಹಾರ ಸ್ಥಳದ ಸದರೀ ಜಯರಾಮಾಚಾರಿ ಸದರೀ ವಾಸಸ್ಥಳಾಗಿ ಮೃತಪಟ್ಟ ವೆಂಕಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 300 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಜಯರಾಮಾಚಾರ್ಯರ ಅರ್ಜಿಯನ್ನು 1887ನೇ ಇಸವಿ ಮಾರ್ಚೀ ತಿಂಗಳು ತಾರೀಖು 15ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಫಿಬ್ರವರೀ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಎಸ್. ಹೇಮಾಜಿರಾವ್,
ಡಿಸ್ಟ್ರಿಕ್ಟು ಜಡ್ಜ್.

ಹಾಸನ ಡಿಸ್ಟ್ರಿಕ್ಟು.

ತಾರೀಖು 19ನೇ ಜನವರೀ 1887.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ದಿವಾನಸಾಹೇಬರವರ ಹುಕ್ಕುಂ ಬನೋಜೀಜಿ ಹಾಸನ ಡಿಸ್ಟ್ರಿಕ್ಟು ಪೈಕೆ ವುಂಜಿರಾಬಾದು ತಾಲ್ಲೂಕಿನಲ್ಲಿ ಇರುವ ಮೂರನಹಳ್ಳಿ ಘಾಟಿಯಲ್ಲಿ ಟೋಲ್‌ಗೆಟಿ ಯಂಬ ಸುಂಕದ ಕಟ್ಟೆವಳಗೆ 1887ನೇ ಇಸವಿ ಏಪ್ರೆಲ್ ಮಾಹೆ 1ನೇ ಮುಕ್ತುಂ ಲಾಗಾಯತು 1888ನೇ ಇಸವಿ ಮಾರ್ಚೀ 31ರ ವರಿಗೆ ಸುಂಕ ವಸೂಲ್ ಮಾಡುವ ಸ್ವಾತಂತ್ರ್ಯವು ಸ್ರ 1887ನೇ ಇಸವಿ ಮಾರ್ಚೀ ತಾರೀಖು 1ರಲ್ಲು ಸಕಲೇಶಪುರದ ಮೊಕ್ತಾಂ ತಾಲ್ಲೂಕು ಕಛೇರಿ ವಳಗೆ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುತ್ತೆ.

2. ವಸೂಲಿ ಹಕ್ಕನ್ನು ಕೊಂಡುಕೊಳ್ಳುವ ಕಂಟ್ರಾಕ್ಟುದಾರನು ಇದಕ್ಕೆ ಲಗ್ಗತ್ತಾಗಿರುವ ಷೆಡ್ಯೂಲಿನಲ್ಲಿ ನಮೂದಾಗಿರುವ ದರಗಳ ಮೇರಿಗೇನೆ ಟೋಲ್ ವಸೂಲ್ ಮಾಡಬೇಕು. ಮತ್ತು ಸ್ರ 1876ನೇ ಇಸವಿ ನವಂಬರ್ 4ನೇ ಮುಕ್ತುಂ 274ನೇ ನಂಬರುವುಳ್ಳ ಲೇಟ್ ಚೀಫ್ ಕಮ್ಮಿಷನರ್ ಸಾಹೇಬರವರ ನೋಟಿಫಿಕೇರ್ಷನ್‌ನಲ್ಲಿ ಫಾಯಿಷ್ ಆಗಿರುವ ರೂಲ್ಸ್ ಪ್ರಕಾರ ನಡದುಕೊಳ್ಳಬೇಕು.

3. ಚಡ ದರಖಾಸ್ತನ್ನಾಗಲಿ ಯಾವ ದರಖಾಸ್ತನ್ನಾಗಲಿ ಅಂಗೀಕರಿಸುವದಕ್ಕೆ ಯಾ ತಿರಸ್ಕರಿಸುವದಕ್ಕೆ ಹಾಸನ ಡಿಸ್ಟ್ರಿಕ್ಟ್ ಆಫೀಸರವರು ಅಧಿಕಾರ ವುಳ್ಳಸಿಕೊಂಡಿರುತ್ತಾರೆ.

4. ಯಾವ ದರಖಾಸ್ತು ಅಂಗೀಕರಿಸಲ್ಪಡುತ್ತದೆಯೋ ಅವನು ಕೂಡಲೆ ದರಖಾಸ್ತು ಮೊಬಲಗಿನಲ್ಲಿ ನಾಲ್ಕರಲ್ಲಿ ವಂದಂಶ ಮೊಬಲಗನ್ನ ಅಡ್ವಾನ್ಸಾಗಿ ತೇವಣಿ ಯಿಟ್ಟು ಬಾಕೀ ಮೊಬಲಗನ್ನು ಸ್ರ್ 1887ನೇ ಇಸವಿ ಏಪ್ರಿಲ್ 20ರ ಲಾಗಾಯತು ಸಮನಾದ ಆರು ಖಿಸ್ತುಗಳಾಗಿ ಪ್ರತಿ ತಿಂಗಳ 20ನೇ ತಾರೀಖಿಗೆ ಪಾವತಿ ಮಾಡಬೇಕು, ದರಖಾಸ್ತುದಾರನು ಪ್ರತಿಮಾಹೆವಾರಿ ಖಿಸ್ತು ಮೊಬಲಗನ್ನು ತಪ್ಪದೇ ಕೊಡುತ್ತಾ ಬರುವದಕ್ಕೆ ಲಾಯಖಾದ ವಬ್ಬನನ್ನು ಜಾಮೀನು ಕೊಡಬೇಕು.

5. ತೇವಣಿ ಯಿಡದೇ ಯಿದ್ದರೆ ಅಥವಾ ಜಾಮೀನು ಕೊಡದೇ ಇದ್ದರೆ ದರಖಾಸ್ತುದಾರರಿಗೆ ಲುಕ್ಸಾನುಕರವಾಗಿ ಕಂಟ್ರಾಕ್ಟ್ ಯ ರಡನೇ ಹರಾಜು ಮಾಡಲ್ಪಡುವದು. ಖಿಸ್ತು ಪ್ರಕಾರ ಹಣ ಕೊಡುವದಕ್ಕೆ ತಪ್ಪಿದರೆ ಹಾಗೆ ಬಾಕಿಯಾದ ಮೊಬಲಗಿಗೆ ಪಾವತಿ ತಾರೀಖಿನ ವರಿಗೆ ತಿಂಗಳು 1ಕ್ಕೆ ರೂಪಾಯಿ 1ಕ್ಕೆ ವಂದು ಕಾಣಿನಂತೆ ಬಡ್ಡೀ ವಸೂಲ್ ಮಾಡಲ್ಪಡುವದು, ಮತ್ತು ಡಿಪ್ಯುಟಿ ಕಮ್ಮಿಷನರವರು ತಮಿಗೆ ಯುಕ್ತ ತೋರುವ ಪ್ರಕಾರ ಅಥವಾ ಜಾಮೀನುದಾರನ ಅಪೇಕ್ಷೆ ಪ್ರಕಾರ ಕಂಟ್ರಾಕ್ಟ್ ಯರಡನೇ ಹರಾಜು ಮಾಡಲ್ಪಡುವದಕ್ಕೆ ಗುರಿಯಾಗತಕ್ಕದ್ದು. ಅದರಿಂದ ಯೀನಾದರೂ ನಷ್ಟ ಸಂಭವಿಸಿದರೆ ಅದು ಕಂಟ್ರಾಕ್ಟುದಾರನಿಂದ ಅಥವಾ ಜಾಮೀನುದಾರನಿಂದ ಕಂದಾಯದ ಬಾಕೀಯಂತೆ ವಸೂಲ್ ಮಾಡಲ್ಪಡತಕ್ಕದ್ದು.

6. ದರಖಾಸ್ತು ಮೊಬಲಗು ಕಲಮು 4 ಮತ್ತು 5ನೇ ಕಲಮಿನಲ್ಲಿ ನಮೂದಾಗುವ ಷರತ್ತಿಗೆ ವಳಪಟ್ಟು ಖಜಾನೆಗೆ ಸಲಾಯಿಸುವ ಸದರೀ ಕಂಟ್ರಾಕ್ಟ್ ಮೊಬಲಗಿನ ರೂಪಾಯಿ 1ಕ್ಕೆ 0—1—0 ಯಂತೆ ಲೋಕಲ್‌ಸೆಸ್ ಕೊಡಲಿಕ್ಕೆ ಕಂಟ್ರಾಕ್ಟುದಾರನು ಬದ್ಧನಾಗಿರುತ್ತಾನೆ.

7. ಪ್ರತಿ ದಿನದ ಟೋಲ್ ವಸೂಲ್ ತೋರಿಸುವ ನಿಜವಾದ ಮತ್ತು ಕರಾರುವಾಕಾ ಲೆಕ್ಕವನ್ನು ಯಿಡಲು ಸಹ ಕಂಟ್ರಾಕ್ಟುದಾರನು ಬದ್ಧನಾಗಿ ಯಿರುವದಲ್ಲದೆ ಡಿಸ್ಟ್ರಿಕ್ಟು ಮತ್ತು ತಾಲ್ಲೂಕು ವೈದ್ಯೋಗಸ್ಥರ ಇನ್‌ಸ್ಪೆಕ್ಷನ್‌ಗೆ ಲೆಕ್ಕ ವಳಗಾಗಿ ಯಿರತಕ್ಕದ್ದು.

8. ಗವರ್ನಮೆಂಟ್ ಟೋಲ್ ಮನೆ ಮತ್ತು ಗೇಟನ್ನು ಕಂಟ್ರಾಕ್ಟುದಾರ ವುಪಯೋಗಿಸತಕ್ಕದ್ದು. ಮತ್ತು ಅವುಗಳನ್ನ ಆತನು ಪೂರಾ ಮರಸ್ತಿನಲ್ಲಿ ಯಿಟ್ಟುಕೊಂಡಿರತಕ್ಕದ್ದು.

9. ಕಂಟ್ರಾಕ್ಟುದಾರನು ಪ್ರತಿ ತಿಂಗಳ ಗುರ್ಯೇ ತಾರೀಖಿನಲ್ಲಿ ಹಿಂದಣ ತಿಂಗಳ ಟೋಲ್ ವಸೂಲ್ ಲೆಕ್ಕವನ್ನ ಮಂಜರಾಬಾದು ತಾಲ್ಲೂಕು ಕಚೇರಿಗೆ ಕಳುಹಿಸತಕ್ಕದ್ದು.

ದರಗಳಪಟ್ಟಿ—1882ನೇ ಇಸವಿ ಮಾರ್ಚೀ 18ನೇ ಮುಕ್ತಂ ಮೈಸೂರು ಗೆಜೆಟ್ಟಿನಲ್ಲಿ ನಮೂದಾಗಿರುತ್ತೆ.

ತಾರೀಖು 19ನೇ ಜನವರೀ 1887.

ಮೈಸೂರು ದಿವಾನ್ ಸಾಹೇಬರವರ ಹುಕ್ಕುಂ ಜವೋಜೀಲ್, ಹಾಸನದ ಡಿಸ್ಟ್ರಿಕ್ಟು ಮಂಜರಾಬಾದು ತಾಲ್ಲೂಕಿನಲ್ಲಿರುವ ಮಾರನಹಳ್ಳಿ ಘಾಟಿಯಲ್ಲಿ ಟೋಲ್‌ಗೇಟ್‌ಯಂಬ ಸುಂಕದ ಕಟ್ಟೀವಳಗೆ ಸ್ರ್ 1887ನೇ ಏಪ್ರಿಲ್ ಮಾಹೆ 1ನೇ ಮುಕ್ತಂ ಲಾಗಾಯತು 1888ನೇ ಇಸವಿ ಮಾರ್ಚೀ 31ರ ವರಿಗೆ ಸುಂಕ ವಸೂಲ್ ಮಾಡುವ ಸ್ವಾತಂತ್ರ್ಯವು ಸ್ರ್ 1887ನೇ ಇಸವಿ ಮಾರ್ಚೀ ತಾರೀಖು 1ರಲ್ಲು ಸಕಲೇಶಪುರ ವೊಕ್ಕುಂ ತಾಲ್ಲೂಕು ಕಚೇರಿಯೊಳಗೆ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುತ್ತೆ.

2. ವಸೂಲಿ ಹಕ್ಕನ್ನು ಕೊಂಡುಕೊಳ್ಳುವ ಕಂಟ್ರಾಕ್ಟುದಾರನು ಷೆಡ್ಯೂಲ್‌ನಲ್ಲಿ ನಮೂದಾಗಿ ಇರುವ ದರಗಳ ಮೇರಿಗೇನೇ ಟೋಲ್ ವಸೂಲ್‌ಮಾಡಬೇಕು, ಮತ್ತು ಸ್ರ್ 1876ನೇ ಇಸವಿ ನವಂಬರ್ 4ನೇ ಮುಕ್ತಂ 274ನೇ ನಂಬಕ್‌ವುಳ್ಳಲೆಟ್ ಚೀಫ್ ಕಮ್ಮಿಷನರ್ ಹಾಹೆಬರವರ ನೋಟಿಫಿಕೇಶನ್‌ನಲ್ಲಿ ಫಾಯಿಷ್ ಆಗಿ ಇರುವ ರೂಲ್ಸ್ ಪ್ರಕಾರ ನಡದುಕೊಳ್ಳಬೇಕು.

3. ಚಡ ದರಖಾಸ್ತನ್ನಾಗಲಿ ಯಾವ ದರಖಾಸ್ತನ್ನಾಗಲಿ ಅಂಗೀಕರಿಸುವದಕ್ಕೆ ಯಾ ತಿರಸ್ಕರಿಸುವದಕ್ಕೆ ಹಾಸನದ ಡೆಪ್ಯುಟಿ ಕಮ್ಮಿಷನರವರು ಅಧಿಕಾರ ವುಳಸಿಕೊಂಡಿರುತ್ತಾರೆ.

4. ಯಾವ ದರಖಾಸ್ತು ಅಂಗೀಕರಿಸಲ್ಪಡುತ್ತದೆಯೋ ಅವನು ಕೂಡಲೆ ದರಖಾಸ್ತು ಮೊಬಲಗಿನಲ್ಲಿ ನಾಲ್ಕರಲ್ಲಿ ವಂದಂಶ ಮೊಬಲಗನ್ನು ಅಡ್ವಾನ್ಸಾಗಿ ತೇವಣಿ ಯಿಟ್ಟು ಬಾಕೀ ಮೊಬಲಗನ್ನು 1887ನೇ ಇಸವಿ ಏಪ್ರಿಲ್ 20ರ ಲಾಗಾಯತುಸಮನಾದ ಆರು ಖಿಸ್ತುಗಳಾಗಿ ಪ್ರತಿ ತಿಂಗಳು 20ನೇ ತಾರೀಖಿಗೆ ಪಾವತೀ ಮಾಡಬೇಕು, ದರಖಾಸ್ತುದಾರನು ಪ್ರತಿ ಮಾಹೇವಾರೀ ಖಿಸ್ತು ಮೊಬಲಗನ್ನು ತಪ್ಪದೇ ಕೊಡುತ್ತಾ ಬರುವದಕ್ಕೆ ಲಾಯಖಾದ ಜಾಮೀನು ಕೊಡಬೇಕು.

5. ಶೇವಣಿ ಯಿಜದೆ ಯಿದ್ದರೆ ಅಥವಾ ಜಾಮೀನು ಕೊಡದೇ ಯಿದ್ದಲ್ಲಿ ದರಖಾಸ್ತುದಾರನಿಗೆ ಲುಕ್ಸಾನು ಕರವಾಗಿ ಕಂಟ್ರಾಕ್ಟು ಯರಪನೇ ಹರಾಜು ಮಾಡಲ್ಪಡುವದು ಖಿಸ್ತು ಪ್ರಕಾರ ಹಣ ಕೊಡುವದಕ್ಕೆ ತಪ್ಪಿದರೆ ಹಾಗೆ ಬಾಯಾದ ಮೊಬಲಗಿಗೆ ಪಾವತೀ ತಾರೀಖಿನ ವರಿಗೆ ತಿಂಗಳು 1ಕ್ಕೆ ರೂಪಾಯಿ 1ಕ್ಕೆ ವಂದು ಕಾಯಿದೆಯಂತೆ ಬಡ್ಡೀ ವಸೂಲ್ ಮಾಡಲ್ಪಡುವದು, ಮತ್ತು ಡೆಪ್ಯೂಟೀ ಕಮ್ಮಿಷನರವರು ತಮ್ಮಿಗೆ ಯುಕ್ತತೋರುವ ಪ್ರಕಾರ ಅಥವಾ ಜಾಮೀನುದಾರನ ಅಪೇಕ್ಷೆ ಪ್ರಕಾರ ಕಂಟ್ರಾಕ್ಟು ಯರಪನೇ ಹರಾಜು ಮಾಡಲ್ಪಡುವದಕ್ಕೆ ಗುರಿಯಾಗತಕ್ಕದ್ದು. ಆದರಿಂದ ಯೀನಾದರೂ ನಷ್ಟ ಸಂಭವಿಸಿದರೆ ಅದು ಕಂಟ್ರಾಕ್ಟುದಾರನಿಂದ ಅಥವಾ ಜಾಮೀನುದಾರನಿಂದ ಕಂದಾಯದ ಬಾಕೀಯಂತೆ ವಸೂಲ್ಮಾಡಲ್ಪಡತಕ್ಕದ್ದು.

6. ದರಖಾಸ್ತು ಮೊಬಲಗು ಕಲಮು 4 ಮತ್ತು 5ನೇ ಕಲಂನಲ್ಲಿ ನಮೂದಾಗುವ ಷರತ್ತಿಗೆ ವಳಪಟ್ಟು ಖಜಾನೆಗೆ ಸಲಾಯಿಸುವ ಸದರೀ ಕಂಟ್ರಾಕ್ಟು ಮೊಬಲಗಿನ ರೂಪಾಯಿ 1ಕ್ಕೆ (1) ವಂದಾಣೆಯಂತೆ ಲೋಕಲ್‌ಸೆಸ್ ಕೊಡಲಿಕ್ಕೆ ಕಂಟ್ರಾಕ್ಟುದಾರನು ಬದ್ಧನಾಗಿ ಯಿರುತ್ತಾನೆ.

7. ಪ್ರತಿ ದಿನದ ಟೋಲ್ ವಸೂಲಿ ತೋರಿಸುವ ನಿಜವಾದ ಮತ್ತು ಕರಾರ್ವಾಕ ಲೆಕ್ಕವನ್ನ ಯಿಜಲು ಸಹ ಕಂಟ್ರಾಕ್ಟುದಾರನು ಬದ್ಧನಾಗಿ ಯಿರುವದಲ್ಲದೆ ಡಿಸ್ಟ್ರಿಕ್ಟು ಮತ್ತು ತಾಲ್ಲೂಕು ಪ್ರದ್ಯೋಗಸ್ತರ ಇನ್‌ಸ್ಪೆಕ್ಷನ್‌ಗೆ ಸದರೀ ಲೆಕ್ಕ ವಳಗಾಗಿ ಯಿರತಕ್ಕದ್ದು.

8. ಗವರ್ಮೆಂಟ್ ಟೋಲ್ ಮನೆ ಮತ್ತು ಗೇಟನ್ನು ಕಂಟ್ರಾಕ್ಟುದಾರನು ವುಪಯೋಗಿಸತಕ್ಕದ್ದು, ಮತ್ತು ಅವುಗಳನ್ನ ಆತನು ಪೂರಾ ದುರಸ್ತಿನಲ್ಲಿ ಯಿಟುಕೊಂಡಿರತಕ್ಕದು.

9. ಕಂಟ್ರಾಕ್ಟುದಾರನು ಪ್ರತಿ ತಿಂಗಳ ಗುರ್ತೇ ತಾರೀಖಿನಲ್ಲಿ ಹಿಂದಿನ ತಿಂಗಳ ಟೋಲ್ ವಸೂಲಿ ಲೆಕ್ಕವನ್ನ ಮುಂಜರಾಬಾದ ತಾಲ್ಲೂಕು ಕಚೇರಿಗೆ ಕಳುಹಿಸತಕ್ಕದ್ದು.

ದರಗಳ ಪಟ್ಟಿ 1852ನೇ ಇಸವಿ ಮಾಚಿದೇ 18ನೇ ಮರ್ತುಂ ಮೈಸೂರು ಗೆಜೆಟ್‌ನಲ್ಲಿ ನಮೂದಾಗಿರುತ್ತೆ.

ಟಿ. ಆನಂದರಾವ್,
ಡೆಪ್ಯೂಟಿ ಕಮ್ಮಿಷನರ್.

ಶಿವಮೊಗ್ಗಾ ಡಿಸ್ಟ್ರಿಕ್ಟು.

ತಾರೀಖು 4ನೇ ಜನವರೀ 1887.

ಇದರಿಂದ ತಿಳಿಸುವದೇನಂದರೆ, ಶಿವಮೊಗ್ಗಾ ಜೈಲ್‌ನಲ್ಲಿ ಖೈದು ಮಾಡಲ್ಪಟ್ಟಿರುವ ಖೈದಿಗಳ ವುಪಯೋಗದ ಬಗ್ಗೆ ಸ್ಯ 1887ನೇ ಏಪ್ರೆಲ್ ಗುರ್ತೇ ತಾರೀಖು ಮೊದಲು 1888ನೇ ಮಾರ್ಚೀ 31ನೇ ತಾರೀಖು ವರಿಗೆ ಎರಡು ದಿನಗಳೂ ಶೇರಿ ಜೀಕಾದ ಆಹಾರ ವಗೈರೇ ದರಖಾಸ್ತು ಜಿನಸುಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಗೆ ಬರುವ ಬಂದು ಮಾಡಲ್ಪಟ್ಟ ದರಖಾಸ್ತುಗಳನ್ನು ಶಿವಮೊಗ್ಗಾ ಜೈಲ್ ಸೂಪರ್‌ಟೆಂಡೆಂಟರವರು ಜೈಲ್‌ಗಳ ಇನ್‌ಸ್ಪೆಕ್ಟರ್ ಜನರಲ್‌ಯವರ ಮಂಜೂರಾತಿಗೆ ವಳಪಟ್ಟು ಸ್ಯ 1887ನೇ ಇಸವಿ ಮಾರ್ಚಿ ವಂದನೇ ತಾರೀಖುವರಿಗೆ ತೆಗದುಕೊಳ್ಳುವರು.

2. ಸದರೀ ಮೇಲ್ಕಂಡ ತಾರೀಖು ತರುವಾಯ ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರದು.

3. "ಶಿವಮೊಗ್ಗಾ ಜೈಲ್‌ಗಾಗಿ ಆಹಾರ ಪದಾರ್ಥಗಳ ಸರಬರಾಯಿ ಬಗ್ಗೆ ದರಖಾಸ್ತುಗಳು" ಯಂಬಡಾಗಿ ವಿಳಾಸ ಬರೆಯಲ್ಪಡತಕ್ಕದ್ದು.

4. 500 ರೂಪಾಯಿಗಳು ನಗದಾಗಿ ಅಥವಾ ಕರೆನ್ಸೀ ನೋಟುಗಳ ಮೂಲಕ ಡಿಪಾಜಿಟ್‌ನಿಂದ ಕಳುಹಿಸಲ್ಪಟ್ಟ ಹೊರ್ತು ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರವು.

5. ದರಖಾಸ್ತುಗಳು ಶಿವಮೊಗ್ಗಾ ಜೈಲ್ ಆಫೀಸಿನಲ್ಲಿ ಹಾಜರಾಗಲಿಕ್ಕೆ ಇಷ್ಟವುಳ್ಳ ದರಖಾಸ್ತುದಾರರ ರೂಬರೂ ಮೇಲ್ಕಂಡ ತಾರೀಖಿನೊಳಗೆ ಶಿವಮೊಗ್ಗಾ ಜೈಲ್ ಸೂಪರ್‌ಟೆಂಡೆಂಟರಿಂದ ಖುಲ್ಲಾ ಮಾಡಲ್ಪಡುವವು.

6. ದರಖಾಸ್ತು ದರಖಾಸ್ತುಗಳಲ್ಲಿಯೂ, ಈ ಕೆಳಗೆ ನಮೂದಿಸುವ ತರಗತಿಯ ಪ್ರತಿ ಖೈದಿಗೂ ದಿನ ಒಂದಕ್ಕೆ ಆಗತಕ್ಕ ದರವು ನಮೂದಿಸಲ್ಪಡತಕ್ಕದ್ದು ಯಾವವಂದರೆ:—

					ರೂ.	ಆ.	ಪೈ.
ನೇಟಿವ್ ಕೂಲಿಯವರಾದ ಗಂಡಸರು		A	ಕ್ಲಾಸ್	.. ..			
ಡಿಟೋ	ಡಿಟೋ	B	,,	.. ..			
ಡಿಟೋ	ಡಿಟೋ	C	,,	.. ..			